# 17-02-2026

# "AWARENESS ON HIV AND BLOOD DONATION"

Vidyavardhaka Sangha ®

## Vidyavardhaka First Grade College
## Sheshadri Iyer Road, Mysuru

IQAC & NSS Jointly Organise

# "AWARENESS ON HIV AND BLOOD DONATION"

Venue : 111 Lecture Hall | Date : 17-02-2026 | Time 11.00 AM

## "ಸಮಾಜದ ಸ್ವಾಸ್ಥ್ಯ ಕಾಪಾಡುವಲ್ಲಿ ವಿದ್ಯಾರ್ಥಿಗಳ ಪಾತ್ರ ಮಹತ್ವವಾದದ್ದು"

ಶ್ರೀ ದೇವರಾಜು.ಹೆಚ್

ನಗರದ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನಲ್ಲಿ ಐಕ್ಯೂಎಸಿ, ಹಾಗೂ ರಾ.ಸೇ.ಯೋ ಜಂಟಿಯಾಗಿ ಆಯೋಜಿಸಿದ್ದ ಹೆಚ್.ಐ.ವಿ ಹಾಗು ರಕ್ತದಾನ ಅರಿವು ಕಾರ್ಯಕ್ರಮದಲ್ಲಿ ಶ್ರೀ ದೇವರಾಜು.ಹೆಚ್. ವೈದ್ಯಕೀಯ ಆಪ್ತ ಸಮಾಲೋಚಕರು, ಸಮುದಾಯ ಆರೋಗ್ಯ ಕೇಂದ್ರ ಹುಲ್ಲಹಳ್ಳಿ ಇವರು ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ ಮಾತನಾಡುತ್ತಿದ್ದರು. ಸಾರ್ವಜನಿಕರಲ್ಲಿ ಹೆಚ್.ಐ.ವಿ ಸೋಂಕಿನ ಬಗ್ಗೆ ಇರುವ ತಪ್ಪು ಕಲ್ಪನೆಯನ್ನು ದೂರ ಮಾಡುವ ಉದ್ದೇಶದಿಂದ ಆರೋಗ್ಯ ತಜ್ಞರು ಮಾಹಿತಿ ನೀಡಿದರು. ಹೆಚ್.ಐ.ವಿ ವೈರೆಸ್ ರೋಗ ನಿರೋಧಕ ಶಕ್ತಿಯನ್ನು ಕುಗ್ಗಿಸುವುದು ಮತ್ತು ಸುರಕ್ಷಿತವಲ್ಲದ ಲೈಗಿಂಕ ಸಂಪರ್ಕ, ಸೋಂಕಿತ ಸೂಜಿಗಳ ಬಳಕೆ, ಸೋಂಕಿತ ರಕ್ತದ ಮೂಲಕ ಮತ್ತು ಸೋಂಕಿತ ತಾಯಿಯಿಂದ ಮಗುವಿಗೆ ಹರಡುವುದನ್ನ ವಿವರಿಸಿದರು. ಇಂದಿನ ತಲೆಮಾರಿನ ಯುವಕರು ಮಾದಕ ವ್ಯಸನಿಗಳಾಗಿದ್ದು, ಸೋಂಕಿತ ಸೂಜಿಗಳ ಬಳಕೆಯಿಂದ ವೇಗವಾಗಿ ಹೆಚ್.ಐ.ವಿ ಹರಡುತ್ತಿದೆ ಎಂದು ಅಭಿಪ್ರಾಯಪಟ್ಟರು.

ಮೈಸೂರಿನ ಜಿಲ್ಲೆಯ ನಂಜನಗೂಡು ತಾಲ್ಲೋಕಿನಲ್ಲಿ ಹೆಚ್ಚಿನ ಪ್ರಮಾಣದ ಹೆಚ್.ಐ.ವಿ ಸೋಂಕಿತರು ಪತ್ತೆಯಾಗಿರುವುದು ವಿಷಾದಕರ ಸಂಗತಿಯಾಗಿದ್ದು ಇದಕ್ಕೆ ಬೇರೆ ರಾಜ್ಯಗಳಿಂದ ಬಂದ ಅಲ್ಲಿನ ಕೈಗಾರಿಕೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ವಲಸಿಗರೇ ಮೂಲ ಕಾರಣ ಎಂದು ಆಭಿಪ್ರಾಯಿಸಿದರು. ವಿದ್ಯಾರ್ಥಿಗಳಿಗೆ ರಕ್ತದಾನದ ಕುರಿತು ಜಾಗೃತಿ ಮೂಡಿಸಿದರು. ಕಾರ್ಯಕ್ರಮದಲ್ಲಿ ಹೆಚ್.ಐ.ವಿ ಮತ್ತು ರಕ್ತದಾನ ಕುರಿತಾದ ಪ್ರಬಂಧ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು. ಈ ಸ್ಪರ್ಧೆಯಲ್ಲಿ ಕಾಲೇಜಿನ 5 ವಿದ್ಯಾರ್ಥಿಗಳಿಗೆ ನಗದು ಬಹುಮಾನವನ್ನು ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಾ.ಎಸ್.ಮರೀಗೌಡ ಮಾತನಾಡುತ್ತಾ, ಮಕ್ಕಳಲ್ಲಿ ಹೆಚ್.ಐ.ವಿ ಸೋಂಕಿನ ಬಗ್ಗೆ ಮಾಹಿತಿ ಇದ್ದರೆ, ಸಮುದಾಯಗಳಿಗೆ ಜಾಗೃತಿ ಮೂಡಿಸಲು ಸಹಾಯಕಾರಿಯಾಗುತ್ತದೆ ಮತ್ತು ವಿದ್ಯಾರ್ಥಿಗಳು ಸ್ವಯಂ ಪ್ರೇರಿತರಾಗಿ ಜಾಗೃತಿಯಿಂದ ರಕ್ತದಾನ ಮಾಡುವುದರ ಮುಖಾಂತರ ಅವಶ್ಯಕತೆ ಇರುವ ರೋಗಿಗಳಿಗೆ ಜೀವ ಉಳಿಸಲು ಮುಂದಾಗಬೇಕೆಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಈ ಕಾರ್ಯಮದಲ್ಲಿ ರಾ.ಸೇ.ಯೋ ಕಾರ್ಯಕ್ರಮಾಧಿಕಾರಿ ಪ್ರೊ.ಸಿದ್ದರಾಜು.ಎಸ್,ಪ್ರೊ.ನಿವೇದಿತಾ ವಿದ್ಯಾರ್ಥಿಗಳು, ಬೋಧಕ ಮತ್ತು ಬೋಧಕೇತರರು ಹಾಜರಿದ್ದರು.


Vidyavardhaka Sangha ®
VIDYAVARDHAKA FIRST GRADE COLLEGE
Sheshadri Iyer Road, Mysuru
IQAC & NSS JOINTLY ORGANISE
"AWARENESS ON HIV & BLOOD DONATION"
Venue : Seminar Hall | Date : 17-02-2026 | Time 11.00 AM
NACO












NACO
KSAPS






VISION
MISSION
UG PROGRAMME
PG PROGRAMME / Ph.D. PROGRAMME
TEACHING FACULTY
NON - TEACHING FACULTY